## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 936 |
| 2. | ಸದಸ್ಯರ ಹೆಸರು | : | ಶ್ರೀ.ರಘುನಾಥ್ ರಾವ್ ಮಲ್ಕಾಪೂರೆ |
| 3. | ಉತ್ತರಿಸಬೇಕಾದ ದಿನಾಂಕ | : | 18.12.2018 |
| 4. | ಉತ್ತರಿಸಬೇಕಾದ ಸಚಿವರು | : | ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಬೀದರ್ ಮೆಡಿಕಲ್ ಕಾಲೇಜಿನ ಬ್ಲಡ್ ಬ್ಯಾಂಕಿನ ಸ್ಥಿತಿ ಅವ್ಯವಸ್ಥೆಗಳ ಆಗರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಹೌದು. |
| (ಆ) | ಹಾಗಿದ್ದಲ್ಲಿ ಬ್ಲಡ್ ಬ್ಯಾಂಕ್ ನಿರ್ವಹಣೆಯಲ್ಲಿ ವಿಫಲರಾಗಿರುವ ವೈದ್ಯಾಧಿಕಾರಿ ಬದಲಾಯಿಸಲು ಜಿಲ್ಲಾ ಆಸ್ಪತ್ರೆ ಸರ್ಜನ್ ತನಿಖೆ ನಡೆಸಿ ವರದಿ ನೀಡಿದ್ದು ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ಒದಗಿಸುವುದು) | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಿಂದ ರಕ್ತ ನಿಧಿ ಕೇಂದ್ರದಲ್ಲಿ ಸರ್ಕಾರದ ನಿಯಮಗಳನ್ನು ಪಾಲಿಸುತ್ತಿರುವ ಕುರಿತು ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಬೆಂಗಳೂರು ರವರಿಂದ ಹೊರಡಿಸಲಾದ ಸುತ್ತೋಲೆಯನ್ವಯ ಜಿಲ್ಲಾ ಶಸ್ತ್ರ ಚಿಕಿತ್ಸಕರು, ಬ್ರಿಮ್ಸ್ ಬೋಧಕ ಆಸ್ಪತ್ರೆ, ಬೀದರ್ ಇವರು ನೀಡಿದ ವರದಿಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ, ಸದರಿಯವರು ರಕ್ತನಿಧಿ ಅಧಿಕಾರಿಯಾಗಿದ್ದಾಗ ರೋಗಿಗಳಿಗೆ ಅತ್ಯಮೂಲ್ಯ ಜೀವರಕ್ಷಕವಾದ ರಕ್ತವನ್ನು ಸಂರಕ್ಷಿಸುವಲ್ಲಿ ಹಾಗೂ ರಕ್ತನಿಧಿ ಸಂಗ್ರಹಣೆಗೆ ಬೇಕಾಗಿರುವ ಉಪಕರಣಗಳನ್ನು ಸರಿಯಾಗಿ ನಿರ್ವಹಿಸದೇ, ಸಂಗ್ರಹಿದ ರಕ್ತವು ಹಾಳಾಗಲು ಕಾರಣರಾಗಿರುವುದು ಸಾಬೀತಾಗಿದ್ದರಿಂದ ಡಾ॥ ವಿರೇಂದ್ರ ಪಾಟೀಲ್ ಸಹಾಯಕ ಪ್ರಾಧ್ಯಾಪಕರು, ಪೆಥಾಲಜಿ ವಿಭಾಗ, ಬ್ರಿಮ್ಸ್, ಬೀದರ್ ಇವರಿಗೆ ಕೆಸಿಎಸ್‌ಆರ್ 1957ರ (ಸಿಸಿಎ) ನಿಯಮ 8(iii) ರನ್ವಯ 2 ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲಾಗಿದೆ. |
| (ಇ) | ಸಾರ್ವಜನಿಕರಿಗೆ ಮತ್ತು ರೋಗಿಗಳಿಗೆ ಅನುಕೂಲವಾಗುವಂತೆ ಬ್ಲಡ್ ಬ್ಯಾಂಕ್ ಕಾರ್ಯನಿರ್ವಹಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು (ಸಂಪೂರ್ಣ ವಿವರ ನೀಡುವುದು) | ಡಾ॥ ವೀರೇಂದ್ರ ಪಾಟೀಲ್, ಸಹಾಯಕ ಪ್ರಾಧ್ಯಾಪಕರು, ಪೆಥಾಲಜಿ ವಿಭಾಗ ಮತ್ತು ರಕ್ತನಿಧಿ ಅಧಿಕಾರಿ, ರಕ್ತನಿಧಿ ಕೇಂದ್ರ, ಬ್ರಿಮ್ಸ್ ಬೋಧಕ ಆಸ್ಪತ್ರೆ, ಬೀದರ್‌ರವರನ್ನು ರಕ್ತ ನಿಧಿ ಕೇಂದ್ರದ ಅಧಿಕಾರಿ ಹುದ್ದೆಯಿಂದ ಬಿಡುಗಡೆ ಮಾಡಿ ಅವರ ಸ್ಥಳದಲ್ಲಿ ಡಾ॥ ರಾಜೇಶ ಪಾರಾ, ಸಹ ಪ್ರಾಧ್ಯಾಪಕರು ರೋಗ ವಿಧಾನ ಶಾಸ್ತ್ರ ವಿಭಾಗ, ಬ್ರಿಮ್ಸ್, ಬೀದರ್ ಇವರನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಲಾಗಿರುತ್ತದೆ. |

ಸಂಖ್ಯೆ: ಆಕುಕ 415 ಎಂಎಸ್‌ಎಫ್ 2018

(ಡಿ.ಕೆ.ಶಿವಕುಮಾರ್)
ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು